# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ವಿವಿಧ ಜಿಲ್ಲಾ ಪಂಚಾಯತಿಗಳ ಹಾಗೂ ಅವುಗಳ ವ್ಯಾಪ್ತಿಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ/ಸಿಬ್ಬಂದಿಯವರ ಬಾಕಿ/ಪ್ರಸಕ್ತ ಸಾಲಿನ ವೇತನ ಹಾಗೂ ಉಪದಾನ ಪಾವತಿಗಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಆರ್ಥಿಕ ಇಲಾಖೆಯ ವೆಚ್ಚ-3, 5 ಶಾಖೆಯ ಕಡತಗಳು ಮತ್ತು ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ ಮುಖ್ಯ ಲೆಕ್ಕಾಧಿಕಾರಿಗಳ ಪತ್ರಗಳು.

**ಪ್ರಸ್ತಾವನೆ:**

ವಿವಿಧ ಜಿಲ್ಲಾ ಪಂಚಾಯತಿಗಳ ಹಾಗೂ ಅವುಗಳ ವ್ಯಾಪ್ತಿಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ/ಸಿಬ್ಬಂದಿಯವರ ಬಾಕಿ/ಪ್ರಸಕ್ತ ಸಾಲಿನ ವೇತನ ಹಾಗೂ ಉಪದಾನ ಪಾವತಿಗಾಗಿ ಪ್ರಧಾನ ಲೆಕ್ಕ ಶೀರ್ಷಿಕೆ 2210, 2225 ಮತ್ತು 2515ರಡಿ ಒಟ್ಟು ರೂ.224.16ಲಕ್ಷಗಳನ್ನು ಹೆಚ್ಚುವರಿ ಬಿಡುಗಡೆಗೊಳಿಸಲು ಪ್ರಸ್ತಾವಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಪಂಚಾಯಿತಿ ಕಾರ್ಯಕ್ರಮದಡಿ ರೂ.224.16ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-196-1-05-300ರಿಂದ ಬಿಡುಗಡೆಗೊಳಿಸಲು ನಿರ್ಣಯಿಸಿ ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 464 ವೆಚ್ಚ 6/2022(ಇ) ದಿನಾಂಕ: 29ನೇ ಸೆಪ್ಟೆಂಬರ್ 2022

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ ಪಂಚಾಯತಿಗಳಿಗೆ ಕಾಲಂ 3 ಕಾರ್ಯಕ್ರಮದಡಿ ಅಧಿಕಾರಿ/ಸಿಬ್ಬಂದಿಯವರ ಬಾಕಿ/ಪ್ರಸಕ್ತ ವೇತನ ಹಾಗೂ ಉಪದಾನ ಪಾವತಿಗಾಗಿ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ರೂ.224.16ಲಕ್ಷ (ರೂಪಾಯಿ ಎರಡು ನೂರ ಇಪ್ಪತ್ತು ನಾಲ್ಕು ಲಕ್ಷದ ಹದಿನಾರು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ.

| ಕ್ರ.ಸಂ. | ಜಿಲ್ಲಾ ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-196-1-05-300 ರಡಿ ಬಿಡುಗಡೆಗೊಳಿಸಿದ ಅನುದಾನ (ರೂ.ಲಕ್ಷಗಳಲ್ಲಿ) | ಷರಾ |
|---|---|---|---|---|
| 1 | 2 | 3 | 4 | 5 |
| 1 | ತುಮಕೂರು | 2515-00-101-0-01-005 | 2.04 | ವೇತನ ವೆಚ್ಚಕ್ಕಾಗಿ |
| 2 | ಉಡುಪಿ | 2225-00-102-0-35-251 | 3.48 | ಉಪದಾನ ಪಾವತಿಗಾಗಿ |
| 3 | ಕೊಡಗು | 2210-00-101-0-35-005 | 17.00 | ವೇತನ ವೆಚ್ಚಕ್ಕಾಗಿ |
| 4 | ಬಾಗಲಕೋಟೆ | 2210-00-103-0-26-005 | 27.14 | ವೇತನ ವೆಚ್ಚಕ್ಕಾಗಿ |
| 5 | ಬಾಗಲಕೋಟೆ | 2210-00-101-0-27-005 | 80.95 | ವೇತನ ವೆಚ್ಚಕ್ಕಾಗಿ |

ಮುಂದುವರೆದಿದೆ……

| | | | | |
|---|---|---|---|---|
| 6 | ಬಾಗಲಕೋಟೆ | 2210-00-102-0-31-005 | 8.22 | ವೇತನ ವೆಚ್ಚಕ್ಕಾಗಿ |
| 7 | ಬಾಗಲಕೋಟೆ | 2210-00-101-0-32-005 | 27.95 | ವೇತನ ವೆಚ್ಚಕ್ಕಾಗಿ |
| 8 | ದಾವಣಗೆರೆ | 2210-00-106-0-48-005 | 34.47 | ವೇತನ ವೆಚ್ಚಕ್ಕಾಗಿ |
| 9 | ಶಿವಮೊಗ್ಗ | 2225-00-102-0-33-005 | 4.13 | ವೇತನ ವೆಚ್ಚಕ್ಕಾಗಿ |
| 10 | ಗದಗ | 2225-00-103-0-34-005 | 16.44 | ವೇತನ ವೆಚ್ಚಕ್ಕಾಗಿ |
| 11 | ಶಿವಮೊಗ್ಗ | 2225-00-103-0-39-005 | 2.34 | ವೇತನ ವೆಚ್ಚಕ್ಕಾಗಿ |
| | | ಒಟ್ಟು | 224.16 | |

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಸುತ್ತೋಲೆರನ್ವಯ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು. ಬಿಡುಗಡೆಗೊಳಿಸಿದ ಈ ಅನುದಾನವನ್ನು ಪ್ರಸ್ತಾವಿತ ವೆಚ್ಚವನ್ನು ಆದ್ಯತೆಯ ಮೇಲೆ ಷರಾದಲ್ಲಿ ತಿಳಿಸಿರುವ ಉದ್ದೇಶಕ್ಕೆ ಮಾತ್ರ ವೆಚ್ಚ ಮಾಡತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಮುಖ್ಯ ಲೆಕ್ಕಾಧಿಕಾರಿಗಳು/ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು. ಪ್ರಸ್ತಾವಿತ ಲೆಕ್ಕ ಶೀರ್ಷಿಕೆಯಡಿ ಬಾಕಿ ವೇತನವನ್ನು ಸೆಳೆಯಬೇಕಾಗಿದ್ದಲ್ಲಿ ಅದಕ್ಕೆ ಆರ್ಥಿಕ ಇಲಾಖೆ ಹೊರಡಿಸಿರುವ ಸುತ್ತೋಲೆಯ ಷರತನ್ನು ಸಡಿಲಿಸಿ ಬಾಕಿ ವೇತನವನ್ನು ಸೆಳೆಯಲು ಸಹಮತಿಸಿದೆ ಎಂದು ಭಾವಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಶ್ರೀಕೃಷ್ಣ ಎನ್. ಬುಗಟ್ಯಾಗೋಳ)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾ.ಅ.ಪ ಇಲಾಖೆ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಸಮಾಜ ಕಲ್ಯಾಣ ಇಲಾಖೆ.
4. ಆಯುಕ್ತರು, ಖಜಾನೆ ಆಯುಕ್ತಾಲಯ, 5 & 6ನೇ ಮಹಡಿ, ಕೆಪಿಟಿಸಿಎಲ್ ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು.
5. ಸಂಬಂಧಪಟ್ಟ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು.
6. ರಕ್ಷಾ ಕಡತಕ್ಕೆ/ಹೆಚ್ಚುವರಿ ಪ್ರತಿ